**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ 22 ಎಸಿಎಂ(2) 2012-13

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು 560 001,
ದಿನಾಂಕ: 17-09-2012.

**-:: ಸುತ್ತೋಲೆ ::-**

**ವಿಷಯ:** 2012-13ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ & ಖಾಸಗಿ ಪಾಲಿಟೆಕ್ನಿಕ್ ವಿದ್ಯಾರ್ಥಿಗಳ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶ ನೀಡುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ: 07/07/2012 & 24-07-2012.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 222 ಟಿಪಿಇ 2012, ದಿ:17/09/2012.
3. ಮಾನ್ಯ ಕರ್ನಾಟಕ ಉಚ್ಛನ್ಯಾಯಲಯದ ರಿಟ್ ಪಿಟಿಷನ್ ಸಂ.32330-32437/2012(EDN-AD) ಇದಕ್ಕೆ ಸಂಬಂಧಿಸಿದ ಅಂತಿಮ ತೀರ್ಪಿನ ದಿನಾಂಕ:10-09-2012.
4. ಸರ್ಕಾರದ ಪತ್ರ ಸಂಖ್ಯೆ: ಇಡಿ 152 ಟಿಪಿಇ 2012, ದಿ:23/07/2012.

-000O000-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ರ ಈ ಕಛೇರಿ ಸುತ್ತೋಲೆಯಲ್ಲಿ 03 ಮತ್ತು 05ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶ ಪಡೆಯುವ ನಿಟ್ಟಿನಲ್ಲಿ ಅರ್ಹತೆ ಹಾಗೂ ಪ್ರವೇಶಾವಧಿಯನ್ನು ನಿಗಧಿಗೊಳಿಸಲಾಗಿತ್ತು.

ಮುಂದುವರೆದಂತೆ, 10 ವಿಷಯಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು ತಮಗೂ ಸಹ 03 & 05ನೇ ಸೆಮಿಸ್ಟರ್ ಡಿಪ್ಲೋಮಾ ವ್ಯಾಸಂಗಕ್ಕೆ ಪ್ರವೇಶ ನೀಡುವಂತೆ ಮಾನ್ಯ ಕರ್ನಾಟಕ ಉಚ್ಛನ್ಯಾಯಲಯಕ್ಕೆ ದಾವೆ ಸಲ್ಲಿಸಿದ್ದು, ಇದಕ್ಕೆ ಸಂಬಂಧಿಸಿದಂತೆ, ಮಾನ್ಯ ಕರ್ನಾಟಕ ಉಚ್ಛನ್ಯಾಯಲಯವು ಉಲ್ಲೇಖ(3)ರ ಅಂತಿಮ ತೀರ್ಪಿನಲ್ಲಿ ಸದರಿ ವಿದ್ಯಾರ್ಥಿಗಳಿಗೆ ಷರತ್ತು ಬದ್ಧ ಪ್ರವೇಶ ನೀಡಲು ಆದೇಶಿಸಿರುತ್ತದೆ.

ಇದರಂತೆ, ಉಲ್ಲೇಖ(2)ರ ಸರ್ಕಾರದ ಆದೇಶದಲ್ಲಿ 2012-13ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ 3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು 1 & 2ನೇ ಸೆಮಿಸ್ಟರ್‌ನಲ್ಲಿ ಹತ್ತು (10) ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಮೂರನೇ ಸೆಮಿಸ್ಟರ್‌ಗೆ ಪ್ರವೇಶ ಪಡೆಯಲು ಮತ್ತು 5ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು 1ರಿಂದ 4ನೇ ಸೆಮಿಸ್ಟರ್‌ವರೆಗೆ ಹತ್ತು(10) ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ, 5ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರೆಂದು ಪರಿಗಣಿಸಿ, ಈ ಕೆಳಕಂಡಂತೆ ಷರತ್ತುಬದ್ಧ ಅನುಮತಿಯನ್ನು ನೀಡಲಾಗಿದೆ.

**ಷರತ್ತುಗಳು:-**

1. 2012-13ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ, 1 ಮತ್ತು 2ನೇ ಸೆಮಿಸ್ಟರ್‌ಗಳಲ್ಲಿ ಹತ್ತು(10) ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಮಾತ್ರ 3ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶ ಪಡೆಯಲು ಅರ್ಹರಿರುತ್ತಾರೆ.

2. 2012-13ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ, 1 ರಿಂದ 4ನೇ ಸೆಮಿಸ್ಟರ್‌ಗಳಲ್ಲಿ ಹತ್ತು(10) ಅಥವಾ ಅದಕ್ಕಿಂತ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಮಾತ್ರ 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶ ಪಡೆಯಲು ಅರ್ಹರಿರುತ್ತಾರೆ.

3. ಮಾನ್ಯ ಉಚ್ಛ ನ್ಯಾಯಾಲಯವು ನೀಡಿರುವ ಆದೇಶದ ಪ್ರಕಾರ ಪ್ರವೇಶ ಪಡೆಯುವ ಎಲ್ಲಾ ವಿದ್ಯಾರ್ಥಿಗಳಿಗೆ ನಿಗಧಿಪಡಿಸಿರುವ ಕನಿಷ್ಠ ತರಗತಿ ಹಾಜರಾತಿಯನ್ನು ಪಡೆಯಲು ಅನುಕೂಲವಾಗುವಂತೆ, ಸದರಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ತರಗತಿಗಳನ್ನು ಆಯಾಯ ಸಂಸ್ಥೆಗಳು ಆಯೋಜಿಸಬೇಕು.

4. ಮೇಲ್ಕಂಡ ಆದೇಶದನ್ವಯ ಪ್ರವೇಶ ಪಡೆಯುವ ಎಲ್ಲಾ ವಿದ್ಯಾರ್ಥಿಗಳಿಗೆ ನಿಗಧಿತ ಆಂತರಿಕ ಮೌಲ್ಯಮಾಪಕ (Internal Test) ಪರೀಕ್ಷೆಗಳನ್ನು ನಡೆಸಬೇಕು.

5. ಈ ಮೇಲ್ಕಂಡ ಕ್ಯಾರಿ ಓವರ್ ನಿಯಮಾವಳಿಗಳು 2012-13ನೇ ಶೈಕ್ಷಣಿಕ ಸಾಲಿಗೆ ಮಾತ್ರ ಅನ್ವಯಿಸುವಂತೆ ವಿದ್ಯಾರ್ಥಿಗಳಿಗೆ ಒಂದು ಬಾರಿಗೆ ಮಾತ್ರ ಅನ್ವಯಿಸಲಾಗಿದೆ.

6. ಈಗಾಗಲೇ ಮಾನ್ಯ ಉಚ್ಛ ನ್ಯಾಯಾಲಯದ ಮಧ್ಯಂತರ ಆದೇಶಗಳ ಪ್ರಕಾರ 2012-13ನೇ ಶೈಕ್ಷಣಿಕ ಸಾಲಿನಲ್ಲಿ 3 ಅಥವಾ 5ನೇ ಸೆಮಿಸ್ಟರ್‌ಗಳಿಗೆ, 11 ಅಥವಾ ಅದಕ್ಕಿಂತ ಹೆಚ್ಚುವರಿ ವಿಷಯಗಳಲ್ಲಿ ಅನುತ್ತೀರ್ಣರಾಗಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು, ಮೇಲ್ಕಂಡ ದಿನಾಂಕ:10-09-2012ರಂದು ಮಾನ್ಯ ಉಚ್ಛ ನ್ಯಾಯಾಲಯವು ನೀಡಿರುವ ಆದೇಶದ ಕ್ಯಾರಿ ಓವರ್ ನಿಯಮಾವಳಿಗಳ ಪ್ರಕಾರ ಪ್ರವೇಶ ಪಡೆಯಲು ಅನರ್ಹರಾಗಿದ್ದು, ಸದರಿ ವಿದ್ಯಾರ್ಥಿಗಳಿಂದ ಪಡೆದಿರುವ ಪ್ರವೇಶ ಶುಲ್ಕವನ್ನು ವಿದ್ಯಾರ್ಥಿಗಳಿಗೆ ಹಿಂತಿರುಗಿಸಿ, ಸದರಿ ವಿದ್ಯಾರ್ಥಿಗಳ ಪ್ರವೇಶವನ್ನು ರದ್ದುಪಡಿಸುವುದು.

7. ಮೇಲ್ಕಂಡ ದಿನಾಂಕ:10-09-2012ರ ಮಾನ್ಯ ಉಚ್ಛ ನ್ಯಾಯಾಲಯದ ಆದೇಶದನ್ವಯ ಪ್ರವೇಶ ಪಡೆಯುವ ಎಲ್ಲಾ ವಿದ್ಯಾರ್ಥಿಗಳಿಗೆ, ಮಾನ್ಯ ಉಚ್ಛ ನ್ಯಾಯಾಲಯವು ನೀಡಿದ ಆದೇಶದ ದಿನಾಂಕದಿಂದ ಹದಿನೈದು(15) ದಿನಗಳ ಒಳಗಾಗಿ ದಂಡರಹಿತ ನಿಗಧಿತ ಕೋರ್ಸು ಶುಲ್ಕ ಪಡೆದು ಪ್ರವೇಶ ನೀಡುವುದು.

8. ಮಾನ್ಯ ಉಚ್ಛ ನ್ಯಾಯಾಲಯದ ಆದೇಶದಂತೆ 2013-14ನೇ ಶೈಕ್ಷಣಿಕ ಸಾಲಿನಿಂದ ಕಡ್ಡಾಯವಾಗಿ ಸರ್ಕಾರದ ಆದೇಶದನ್ವಯ ರಚಿಸಲಾದ REGULATIONS AND GUIDELINES FOR DIPLOMA COURSES AS PER THE CURRICULUM C-09/10 ಸರ್ಕಾರದ ಆದೇಶ ಸಂಖ್ಯೆ: ಇಡಿ 178 ಟಿಪಿಇ 2009, ದಿನಾಂಕ:01-08-2009ರಲ್ಲಿ ತಿಳಿಸಿರುವ ಕ್ಯಾರಿ ಓವರ್ ನಿಯಮಾವಳಿಗಳ ಪ್ರಕಾರ 1 ರಿಂದ 4ನೇ ಸೆಮಿಸ್ಟರ್‌ಗಳಲ್ಲಿ 4 ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಮಾತ್ರ 3ನೇ ಮತ್ತು 5ನೇ ಸೆಮಿಸ್ಟರ್‌ಗೆ ಪ್ರವೇಶ ಪಡೆಯಲು ಅರ್ಹತೆ ಹೊಂದಿರುತ್ತಾರೆ.

**ಪ್ರಯುಕ್ತ, ಉಲ್ಲೇಖ(1)ರ ದಿ:24-07-2012ರ ಸುತ್ತೋಲೆಯಲ್ಲಿನ 03 ಮತ್ತು 5ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶದ ಅರ್ಹತೆಯನ್ನು ಸಡಿಲಗೊಳಿಸಿ, ಉಲ್ಲೇಖ(2)ರ ಸರ್ಕಾರದ ಮೇಲ್ಕಂಡ ಆದೇಶದಂತೆ 2012-13ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ ಪರಿಗಣಿಸಿರುವುದನ್ನು ಸರ್ಕಾರಿ, ಅನುದಾನಿತ & ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ ತಿಳಿಸುತ್ತಾ, ನಿಯಮಗಳ ಪ್ರಕಾರ ಪರಿಶೀಲಿಸಿ ಈ ಕೆಳಕಂಡಂತೆ ಪ್ರವೇಶ ನೀಡುವ ಬಗ್ಗೆ ಕ್ರಮ ತೆಗೆದುಕೊಳ್ಳಬೇಕೆಂದು ಸೂಚಿಸಲಾಗಿದೆ.**

| | | |
|---|---|---|
| 1. | ಮೂರು & ಐದನೇ ಸೆಮಿಸ್ಟರ್ ಡಿಪ್ಲೋಮಾ ಅಭ್ಯರ್ಥಿಗಳ ಪ್ರವೇಶದ ಅಂತಿಮ ದಿನಾಂಕ<br>**ಸೂಚನೆ:-**ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳನ್ನು ಕಡ್ಡಾಯವಾಗಿ ಪ್ರವೇಶ ಶುಲ್ಕದ ಜೊತೆಗೆ ಪಾವತಿ ಮಾಡತಕ್ಕದ್ದು. | ದಿನಾಂಕ: **29-09-2012**ರ ವರೆಗೆ ಯಾವುದೇ ದಂಡ ಶುಲ್ಕವಿಲ್ಲದೆ ಪ್ರವೇಶ ನೀಡಬಹುದಾಗಿದೆ. |

ವಿಶೇಷ ಸೂಚನೆ:–

1. 2013–14ನೇ ಸಾಲಿನಿಂದ ಕಡ್ಡಾಯವಾಗಿ ಡಿಪ್ಲೋಮಾ ವಿದ್ಯಾರ್ಥಿಗಳು ಮೂರನೇ ಹಾಗೂ ಐದನೇ ಸೆಮಿಸ್ಟರ್‌ಗಳಿಗೆ ಪ್ರವೇಶ ಪಡೆಯಲು 2009–10ನೇ ಸಾಲಿನಲ್ಲಿದ್ದಂತೆಯೇ ನಾಲ್ಕು ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಮಾತ್ರ ಅರ್ಹತೆಯನ್ನು ಹೊಂದಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ, 2012–13ನೇ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ 01, 02 & 03ನೇ ವರ್ಷದ ಎಲ್ಲಾ ಡಿಪ್ಲೋಮಾ ವಿದ್ಯಾರ್ಥಿಗಳಿಂದ ಮೇಲ್ಕಂಡ ವಿಷಯವು ತಮ್ಮ ಗಮನಕ್ಕೆ ಬಂದಿರುತ್ತದೆಂದು ಕಡ್ಡಾಯವಾಗಿ ಮುಚ್ಚಳಿಕೆ ಪತ್ರವನ್ನು ಬರೆಸಿಕೊಳ್ಳತಕ್ಕದ್ದು.

2. ಸದರಿ ವಿಷಯವನ್ನು ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರು ಕಡ್ಡಾಯವಾಗಿ ವಿದ್ಯಾರ್ಥಿಗಳಿಗೆ, ಪೋಷಕರಿಗೆ ಹಾಗೂ ಸಂಬಂಧಪಟ್ಟ ಎಲ್ಲರಿಗೂ ಪತ್ರಿಕೆ / ಟಿ.ವಿ ಮಾಧ್ಯಮದ ಮೂಲಕ ತಿಳಿಸಿ ಮನದಟ್ಟು ಮಾಡಲು ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ಮೇಲ್ಕಂಡ ಎಲ್ಲಾ ಸೂಚನೆ ಹಾಗೂ ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಹಾಗೂ ತಾಂತ್ರಿಕ ಪರೀಕ್ಷಾ ಮಂಡಳಿ ನಿಯಮಗಳನ್ವಯ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟು ಮೇಲ್ಕಂಡ ಅವಧಿಯಲ್ಲಿ ಸದರಿ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರವೇಶ ನೀಡತಕ್ಕದ್ದು.

ಸಹಿ/–
**ನಿರ್ದೇಶಕರು**

ಇವರಿಗೆ,

*ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ & ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ.*

ಪ್ರತಿ:

1. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
2. ಜಂಟಿ ನಿರ್ದೇಶಕರು (ಸಿಡಿಸಿ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
4. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
5. ನಿರ್ದೇಶಕರ ಆಪ್ತ ಶಾಖೆಗೆ
6. ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ ಡಿಪ್ಲೊಮಾ ಕೋರ್ಸುಗಳಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಪ್ರಕಾರ ಅಳವಡಿಸಬೇಕಾಗಿರುವ ಕ್ಯಾರಿ ಓವರ್ ನಿಯಮಗಳ ಬಗ್ಗೆ.**

**ಓದಲಾಗಿದೆ:**

01. ಸರ್ಕಾರದ ಆದೇಶಸಂಖ್ಯೆ: ಇಡಿ 178 ಟಪಿಇ 2009, ದಿನಾಂಕ: 01.08.2009.
02. ಸರ್ಕಾರದ ಆದೇಶಸಂಖ್ಯೆ: ಇಡಿ 152 ಟಪಿಇ 2012, ದಿನಾಂಕ: 23.07.2012.
03. ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿಸಂಖ್ಯೆ: 32330-437/2012 -ಶ್ರೀ.ಜೈಸನ್ ಸಂತೋಷ್ ಮತ್ತು ಇತರರು.
04. ನಿರ್ದೇಶಕರು, ತಾಂತ್ರಿಕ ಶಿಕ್ಷಣ, ಇವರ ಪತ್ರಸಂಖ್ಯೆ: ಡಿಟಇ: 44 ಸಿಡಿಸಿ(1) 2011, ದಿನಾಂಕ: 14.09.2012.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಕ್ಯಾರಿ ಓವರ್ ನಿಯಮಾವಳಿಗಳ ಪ್ರಕಾರ 4 ಅಥವಾ ಅದಕ್ಕಿಂತ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಮಾತ್ರ 3 ಹಾಗೂ 5ನೇ ಸೆಮಿಸ್ಟರ್‌ಗಳಿಗೆ ಪ್ರವೇಶ ಪಡೆಯಲು ಅರ್ಹರಾಗಿರುತ್ತಾರೆ ಎಂದು ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಪತ್ರದಲ್ಲಿ "2012-13ನೇ ಶೈಕ್ಷಣಿಕ ಸಾಲಿಗೆ ಮಾತ್ರ ಅನ್ವಯಿಸುವಂತೆ ಡಿಪ್ಲೊಮಾ ವಿದ್ಯಾರ್ಥಿಗಳು ಮೂರನೇ ಮತ್ತು ಐದನೇ ಸೆಮಿಸ್ಟರ್ ಡಿಪ್ಲೊಮಾ ಕೋರ್ಸುಗಳಿಗೆ ಪ್ರವೇಶ ಪಡೆಯಲು ಎಂಟು ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಮಾತ್ರ ಅರ್ಹರಾಗಿರುತ್ತಾರೆಂದು ಹಾಗೂ 2013-14ನೇ ಸಾಲಿನಿಂದ ಕಡ್ಡಾಯವಾಗಿ ಡಿಪ್ಲೊಮಾ ವಿದ್ಯಾರ್ಥಿಗಳು ಮೂರನೇ ಹಾಗೂ ಐದನೇ ಸೆಮಿಸ್ಟರ್‌ಗಳಿಗೆ ಪ್ರವೇಶ ಪಡೆಯಲು 2009-10ನೇ ಸಾಲಿನಲ್ಲಿದ್ದಂತೆಯೇ ನಾಲ್ಕು ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಮಾತ್ರ ಅರ್ಹತೆಯನ್ನು ಹೊಂದಿರುತ್ತಾರೆ." ಎಂದು ಆದೇಶಿಸಲಾಗಿತ್ತು.

ಮೇಲ್ಕಂಡ ಕ್ರಮಸಂಖ್ಯೆ: (4)ರ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ನಿರ್ದೇಶಕರು ಕೆಲವು ಡಿಪ್ಲೊಮಾ ವಿದ್ಯಾರ್ಥಿಗಳು ಸರ್ಕಾರದ ದಿನಾಂಕ: 23.07.2012ರ ಆದೇಶವನ್ನು ಪ್ರಶ್ನಿಸಿ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಸಂಖ್ಯೆ: 32330-437/2012 ಅನ್ನು ದಾಖಲಿಸಿದ್ದು ಹಾಗೂ ಮಾನ್ಯ ಉಚ್ಚ ನ್ಯಾಯಾಲಯವು ಮೇಲೆ ಕ್ರಮಸಂಖ್ಯೆ: (3)ರಲ್ಲಿ ಓದಿರುವ ದಿನಾಂಕ: 10.09.2012ರಂದು ನೀಡಿರುವ ತೀರ್ಪಿನನ್ವಯ 2012-13ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ 1 ರಿಂದ 4ನೇ ಸೆಮಿಸ್ಟರ್‌ಗಳಲ್ಲಿ 10 ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ 3ನೇ ಮತ್ತು 5ನೇ ಸೆಮಿಸ್ಟರ್‌ಗೆ ಪ್ರವೇಶ ನೀಡಲು ಸೂಕ್ತ ಸರ್ಕಾರಿ ಆದೇಶವನ್ನು ಹೊರಡಿಸಬೇಕೆಂದು ಕೋರಿರುತ್ತಾರೆ.

ತಾಂತ್ರಿಕ ಶಿಕ್ಷಣ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶಸಂಖ್ಯೆ: ಇಡಿ 222 ಟಿಪಿಇ 2012, ಬೆಂಗಳೂರು, ದಿನಾಂಕ: 17ನೇ ಸೆಪ್ಟೆಂಬರ್ 2012.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2012-13ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ ಡಿಪ್ಲೊಮಾ ಕೋರ್ಸುಗಳ 1 ರಿಂದ 4ನೇ ಸೆಮಿಸ್ಟರ್‌ಗಳಲ್ಲಿ 10 ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ 3ನೇ ಮತ್ತು 5ನೇ ಸೆಮಿಸ್ಟರ್‌ಗೆ ಪ್ರವೇಶ ನೀಡಲು ಈ ಕೆಳಕಂಡ ಷರತ್ತು ಹಾಗೂ ನಿಬಂಧನೆಗಳಿಗೊಳಪಟ್ಟು ಅನುಮತಿ ನೀಡಿದೆ.

1) 2012-13ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ, 1 ಮತ್ತು 2ನೇ ಸೆಮಿಸ್ಟರ್‌ಗಳಲ್ಲಿ ಹತ್ತು(10) ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಮಾತ್ರ 3ನೇ ಸೆಮಿಸ್ಟರ್ ಡಿಪ್ಲೊಮಾ ತರಗತಿಗಳಿಗೆ ಪ್ರವೇಶ ಪಡೆಯಲು ಅರ್ಹರಿರುತ್ತಾರೆ.
2) 2012-13ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ, 1ರಿಂದ 4ನೇ ಸೆಮಿಸ್ಟರ್‌ಗಳಲ್ಲಿ ಹತ್ತು(10) ಅಥವಾ ಅದಕ್ಕಿಂತ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಮಾತ್ರ 5ನೇ ಸೆಮಿಸ್ಟರ್ ಡಿಪ್ಲೊಮಾ ತರಗತಿಗಳಿಗೆ ಪ್ರವೇಶ ಪಡೆಯಲು ಅರ್ಹರಿರುತ್ತಾರೆ.
3) ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ಆದೇಶದ ಪ್ರಕಾರ ಪ್ರವೇಶ ಪಡೆಯುವ ಎಲ್ಲಾ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಕನಿಷ್ಟ ತರಗತಿ ಹಾಜರಾತಿಯನ್ನು ಪಡೆಯಲು ಅನುಕೂಲವಾಗುವಂತೆ, ಸದರಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ತರಗತಿಗಳನ್ನು ಆಯಾಯ ಸಂಸ್ಥೆಗಳು ಆಯೋಜಿಸಬೇಕು.
4) ಮೇಲ್ಕಂಡ ಆದೇಶದನ್ವಯ ಪ್ರವೇಶ ಪಡೆಯುವ ಎಲ್ಲಾ ವಿದ್ಯಾರ್ಥಿಗಳಿಗೆ ನಿಗದಿತ ಆಂತರಿಕ ಮೌಲ್ಯಮಾಪಕ ಪರೀಕ್ಷೆಗಳನ್ನು ನಡೆಸಬೇಕು.
5) ಈ ಮೇಲ್ಕಂಡ ಕ್ಯಾರಿ ಓವರ್ ನಿಯಮಾವಳಿಗಳು 2012-13ನೇ ಶೈಕ್ಷಣಿಕ ಸಾಲಿಗೆ ಮಾತ್ರ ಅನ್ವಯಿಸುವಂತೆ ವಿದ್ಯಾರ್ಥಿಗಳಿಗೆ ಒಂದು ಬಾರಿಗೆ ಮಾತ್ರ ಅನ್ವಯಿಸಲಾಗಿದೆ.
6) ಈಗಾಗಲೇ ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶಗಳ ಪ್ರಕಾರ 2012-13ನೇ ಶೈಕ್ಷಣಿಕ ಸಾಲಿನಲ್ಲಿ 3 ಅಥವಾ 5ನೇ ಸೆಮಿಸ್ಟರ್‌ಗಳಿಗೆ 11 ಅಥವಾ ಅದಕ್ಕಿಂತ ಹೆಚ್ಚುವರಿ ವಿಷಯಗಳಲ್ಲಿ ಅನುತ್ತೀರ್ಣರಾಗಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು. ಮೇಲ್ಕಂಡ ದಿನಾಂಕ: 10/09/2012ರಂದು ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ಆದೇಶದ ಕ್ಯಾರಿ ಓವರ್ ನಿಯಮಾವಳಿಗಳ ಪ್ರಕಾರ ಪ್ರವೇಶ ಪಡೆಯಲು ಅನರ್ಹರಾಗಿದ್ದು, ಸದರಿ ವಿದ್ಯಾರ್ಥಿಗಳಿಂದ ಪಡೆದಿರುವ ಪ್ರವೇಶ ಶುಲ್ಕವನ್ನು ವಿದ್ಯಾರ್ಥಿಗಳಿಗೆ ಹಿಂತಿರುಗಿಸಿ, ಸದರಿ ವಿದ್ಯಾರ್ಥಿಗಳ ಪ್ರವೇಶವನ್ನು ರದ್ದುಪಡಿಸುವುದು.

7) ಮೇಲ್ಕಂಡ ದಿನಾಂಕ: 10/09/2012ರ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದನ್ವಯ ಪ್ರವೇಶ ಪಡೆಯುವ ಎಲ್ಲಾ ವಿದ್ಯಾರ್ಥಿಗಳಿಗೆ, ಮಾನ್ಯ ಉಚ್ಚ ನ್ಯಾಯಾಲಯವು ನೀಡಿದ ಆದೇಶದ ದಿನಾಂಕದಿಂದ ಹದಿನೈದು(15) ದಿನಗಳ ಒಳಗಾಗಿ ದಂಡರಹಿತ ನಿಗದಿತ ಕೋರ್ಸು ಶುಲ್ಕ ಪಡೆದು ಪ್ರವೇಶ ನೀಡುವುದು.

8) ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ 2013-14ನೇ ಶೈಕ್ಷಣಿಕ ಸಾಲಿನಿಂದ ಕಡ್ಡಾಯವಾಗಿ ಸರ್ಕಾರದ ಆದೇಶದನ್ವಯ ರಚಿಸಲಾದ REGULATIONS AND GUIDELINES FOR DIPLOMA COURSES AS PER THE CURRICULUM C-09/10 ಸರ್ಕಾರದ ಆದೇಶಸಂಖ್ಯೆ: ಇಡಿ 178 ಟಿಪಿಇ 2009, ದಿನಾಂಕ: 01.08.2009ರಲ್ಲಿ ತಿಳಿಸಿರುವ ಕ್ಯಾರಿ ಓವರ್ ನಿಯಮಾವಳಿಗಳ ಪ್ರಕಾರ 1 ರಿಂದ 4ನೇ ಸೆಮಿಸ್ಟರ್‌ಗಳಲ್ಲಿ 4 ಅಥವಾ ಕಡಿಮೆ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಮಾತ್ರ 3ನೇ ಮತ್ತು 5ನೇ ಸೆಮಿಸ್ಟರ್‌ಗೆ ಪ್ರವೇಶ ಪಡೆಯಲು ಅರ್ಹತೆ ಹೊಂದಿರುತ್ತಾರೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**(ಬಿ.ಎನ್.ಜಗದೀಶ್),**
**ಸರ್ಕಾರದ ಅಧೀನಕಾರ್ಯದರ್ಶಿ,**
**ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).**

ಗೆ,

01. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
02. ಕಾರ್ಯದರ್ಶಿಗಳು, ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ, ಅರಮನೆ ರಸ್ತೆ, ಬೆಂಗಳೂರು.
03. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತಕಾರ್ಯದರ್ಶಿ-ಇವರ ಮಾಹಿತಿಗಾಗಿ.
04. ಸರ್ಕಾರದ ಪ್ರಧಾನಕಾರ್ಯದರ್ಶಿ, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ)-ಇವರ ಆಪ್ತಕಾರ್ಯದರ್ಶಿ -ಇವರ ಮಾಹಿತಿಗಾಗಿ.
05. ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ.
06. ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.